**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಪುಟ್ಟಣ್ಣ, ಶ್ರೀ ಡಿ.ಟಿ ಶ್ರೀನಿವಾಸ ಇವರು ಮಂಡಿಸಿರುವ ನಿಯಮ-330ಕ್ಕೆ ಉತ್ತರಿಸುವ ಬಗ್ಗೆ.**

**ವಿಷಯ:**

**ಸರ್ಕಾರಿ ಪ್ರೌಢಶಾಲೆಗಳಲ್ಲಿ ನೇಮಕವಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶಿಕ್ಷಕರನ್ನು ಸಾಲಿನಲ್ಲಿ ನೇಮಕಾತಿ ಸಂದರ್ಭದಲ್ಲಿ ನೀಡಿದ್ದ ಮೂಲ ದಾಖಲೆಗಳು ನಕಲಿಯಾಗಿವೆ ಎಂದು 2022-23ಬೇ ಸಾಲಿನಲ್ಲಿ ಸುಮಾರು 81 ಜನ ಸಹಶಿಕ್ಷಕರನ್ನು ಸೇವೆಯಿಂದ ಅಮಾನತ್ತುಗೊಳಿಸಿ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖಾ ಸಮಿತಿಯನ್ನು ನೇಮಕ ಮಾಡಲಾಗಿದೆ. ಅಮಾನತ್ತುಗೊಂಡಿರುವ ಶಿಕ್ಷಕರಲ್ಲಿ ಹೆಚ್ಚಿನವರು ವಿಜ್ಞಾನ ಮತ್ತು ಗಣಿತ ಶಿಕ್ಷಕರುಗಳೇ ಆಗಿದ್ದಾರೆ. ಇವರನ್ನು ಅಮಾನತ್ತು ಮಾಡಿದ 6 ತಿಂಗಳ ನಂತರ ಶೇಕಡ 75ರಷ್ಟು ವೇತನವನ್ನು ಕಳೆದ 3 ವರ್ಷಗಳಿಂದ ವೇತನ ನೀಡಲಾಗುತ್ತಿದ್ದು, ಇದರಿಂದ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗುತ್ತಿದೆ. ಮೂರುವರೆ ವರ್ಷ ಆದರೂ ಇವರ ತನಿಖೆಯನ್ನು ಪೂರ್ಣಗೊಳಿಸದೆ ಯಾವುದೇ ತೀರ್ಮಾನವನ್ನು ಕೈಗೊಳ್ಳದೆ ಶಿಕ್ಷಣ ಇಲಾಖಾ ಅಧಿಕಾರಿಗಳು ವಿನಾ ಕಾರಣ ವಿಳಂಬ ಮಾಡಲಾಗುತ್ತಿದೆ. ಈ ಶಿಕ್ಷಕರುಗಳಿಗೆ ಪ್ರತಿ ತಿಂಗಳು ಮನೆಯಲ್ಲಿ ಕೂರಿಸಿ ಲಕ್ಷಾಂತರ ರೂಪಾಯಿ ಸಂಬಳವನ್ನು ನೀಡುತ್ತಿದ್ದಾರೆ. ಸದರಿ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದ ಸರ್ಕಾರಿ ಶಾಲೆಗಳಲ್ಲಿ ಇವರ ಸ್ಥಳದಲ್ಲಿ ಬೇರೆ ಶಿಕ್ಷಕರನ್ನು ನೇಮಕ ಮಾಡದೆ ವರ್ಗಾವಣೆಯಲ್ಲಿಯು ಹುದ್ದೆ ತುಂಬದೆ ಇರುವುದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಸರ್ಕಾರಕ್ಕೆ ಆಗುತ್ತಿರುವ ನಷ್ಟವನ್ನು ತಪ್ಪಿಸುವ ಕಾರಣದಿಂದಾಗಿ ಕೂಡಲೇ ಸದರಿ ಶಿಕ್ಷಕರುಗಳ ಮೇಲೆ ಇರುವ ತನಿಖೆಯನ್ನು ಪೂರ್ಣಗೊಳಿಸಬೇಕೆಂಬ ವಿಷಯವನ್ನು ನಿಯಮ 330ರಲ್ಲಿ ಪ್ರಸ್ತಾಪಿಸಿರುತ್ತಾರೆ.**

## ಉತ್ತರ:

2012-13 ಮತ್ತು 2014-15ನೇ ಸಾಲಿನ ಪ್ರೌಢಶಾಲಾ ಸಹಶಿಕ್ಷಕರು ಗ್ರೇಡ್-2 ಮತ್ತು ದೈಹಿಕ ಶಿಕ್ಷಕರು ಗ್ರೇಡ್-1 ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಅಕ್ರಮ ನೇಮಕಾತಿಯಲ್ಲಿನ ಆರೋಪಿತ ಶಿಕ್ಷಕರಿಗೆ ಶಿಸ್ತು ಪ್ರಾಧಿಕಾರಿಗಳಾದ ಶಾಲಾ ಶಿಕ್ಷಣ ಇಲಾಖೆಯ ಆಯಾ ಜಿಲ್ಲಾ ಉಪ ನಿರ್ದೇಶಕರಗಳು ಸದರಿ ಶಿಕ್ಷಕರನ್ನು ಅಮಾನತ್ತುಗೊಳಿಸಿರುತ್ತಾರೆ.ಪ್ರಕರಣಕ್ಕೆ ಸಂಬಂಧಿಸಿದಂತೆ, ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿರುತ್ತದೆ.

ಒಟ್ಟು 79 ಪ್ರಕರಣಗಳಿದ್ದು, ಜಿಲ್ಲಾವಾರು ಅಂಕಿ-ಅಂಶದ ಮಾಹಿತಿ ಕೆಳಗಿನಂತಿದೆ.

| ಕ್ರ.ಸಂ | ಜಿಲ್ಲೆಯ ಹೆಸರು | ಅಮಾನತ್ತುಗೊಂಡ ಶಿಕ್ಷಕರ ಸಂಖ್ಯೆ |
|---|---|---|
| 1 | ಕೋಲಾರ | 29 |
| 2 | ತುಮಕೂರು | 12 |
| 3 | ಬೆಂಗಳೂರು ದಕ್ಷಿಣ | 7 |
| 4 | ಬೆಂಗಳೂರು ಉತ್ತರ | 1 |
| 5 | ಬೆಂಗಳೂರು ಗ್ರಾಮಾಂತರ | 2 |
| 6 | ಚಿಕ್ಕಬಳ್ಳಾಪುರ | 9 |
| 7 | ಚಿತ್ರದುರ್ಗ | 7 |
| 8 | ದಾವಣಗೆರೆ | 3 |
| 9 | ಮಧುಗಿರಿ | 6 |
| 10 | ಶಿವಮೊಗ್ಗ | 2 |
| 11 | ರಾಮನಗರ | 1 |
| | **ಒಟ್ಟು** | **79** |

ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವೃಂದಕ್ಕೆ ಸಂಬಂಧಪಟ್ಟಂತೆ ಶಿಸ್ತುಪ್ರಾಧಿಕಾರಿಯವರು ಆಯಾ ಜಿಲ್ಲೆಯ ಉಪ ನಿರ್ದೇಶಕರುಗಳು ಆಗಿರುತ್ತಾರೆ. ಆದರೆ, ಸದರಿ ಪ್ರಕರಣವು ಸಂಕೀರ್ಣ ಮತ್ತು ಅತ್ಯಂತ ಗಂಭೀರ ಸ್ವರೂಪದ್ದಾಗಿರುವುದರಿಂದ ಈ ಕುರಿತು ನಿವೃತ್ತ ನ್ಯಾಯಾಧೀಶರಿಂದ ತನಿಖೆಗೆ ತೀರ್ಮಾನಿಸಿ, ಎಲ್ಲ ಪ್ರಕರಣಗಳು ಒಂದೇ ಸ್ವರೂಪದ್ದಾಗಿರುವುದರಿಂದ ಸದರಿ ಪ್ರಕರಣಗಳ ತನಿಖೆಗೆ ಆಯಾ ಜಿಲ್ಲಾ ಉಪ ನಿರ್ದೇಶಕರುಗಳು ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲಾಗಿರುತ್ತದೆ ಹಾಗೂ ಮಂಡನಾಧಿಕಾರಿಯನ್ನು ನೇಮಿಸಲಾಗಿರುತ್ತದೆ. ವಿಚಾರಣೆಗಳು ಜಿಲ್ಲಾವಾರು ಪ್ರತ್ಯೇಕ ವಿಚಾರಣೆಗಳಾಗಿರುತ್ತವೆ.

ಪ್ರಕರಣದ ವಿಚಾರಣೆ ಪ್ರಾರಂಭವಾಗಿ ಪ್ರಗತಿ ಹಂತದಲ್ಲಿದೆ. ವಿಚಾರಣೆ ವರದಿಯನ್ನು ಕನಿಷ್ಠ ಅವಧಿಯೊಳಗೆ ಸಲ್ಲಿಸಲು ಕೋರಲಾಗಿರುತ್ತದೆ. ಸದರಿ ವಿಚಾರಣಾಧಿಕಾರಿಗಳಿಗೆ 79 ಶಿಕ್ಷಕರ ವಿಚಾರಣೆಯನ್ನು ವಹಿಸಿರುವುದರಿಂದ ಈ ಎಲ್ಲಾ 79 ಶಿಕ್ಷಕರ ವಿಚಾರಣೆಯನ್ನು ಪ್ರತ್ಯೇಕವಾಗಿ ನಡೆಸಬೇಕಿರುವುದರಿಂದ ವಿಚಾರಣೆ ನಡೆಸಲು ಇನ್ನೂ ಹೆಚ್ಚಿನ ಕಾಲಾವಕಾಶ ನೀಡಬೇಕಿರುತ್ತದೆ.

ಸದರಿ ಶಿಕ್ಷಕರ ವಿರುದ್ಧ ಇಲಾಖಾ ವಿಚಾರಣೆ ನಡೆಯುತ್ತಿರುವುದರಿಂದ ಸದರಿ ಶಿಕ್ಷಕರಿಗೆ ಕೆ.ಸಿ.ಎಸ್ .ಆರ್ ನಿಯಮ 98(ಬಿ)(i)(ii) ಮತ್ತು (iii)ರಂತೆ ಶೇಕಡಾ 50 ರಷ್ಟು ಜೀವನಾಧಾರ ಭತ್ಯೆಯನ್ನು ನೀಡಲಾಗುತ್ತಿದೆ.

ಸದರಿ ಶಿಕ್ಷಕರುಗಳ ಅಮಾನತ್ತಿನಿಂದ ತೆರವಾಗಿರುವ ಹುದ್ದೆಗಳಿಗೆ ಮಕ್ಕಳಿಗೆ ಶೈಕ್ಷಣಿಕವಾಗಿ ಯಾವುದೇ ತೊಂದರೆಯಾಗದಂತೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪ ನಿರ್ದೇಶಕರು ತಾತ್ಕಾಲಿಕ ಪರ್ಯಾಯ ವ್ಯವಸ್ಥೆ ಮಾಡಲಾಗಿರುತ್ತದೆ.

**ಸಂಖ್ಯೆ: ಇಪಿ 68 ಎಸ್‌ಇಎಸ್ 2026**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**